ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:417/2024

ಚಾಸಾ:3 ಪ್ರಾಸಾ:4

ದಿನಾಂಕ: 16.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಉಮೇಶ |
| ತಂದೆಯ ಹೆಸರು | : | ಮೋಹನ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಕುಂಭಾಶಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಅಪಘಾತ ಸಂಭವಿಸಿದ್ದು ಪೊಲೀಸರು ಸೂಚಿಸಿದ ಮೇರೆಗೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಬಗ್ಗೆ ಬೇರೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಿಸಿ ಹೇಳಿಕೆ ಪಡೆದಿಲ್ಲ. ಸಾಕ್ಷಿ ನಿಪಿ-5 ರಿಂದ 8ನ್ನು ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 02-01-2024 ರಂದು ರಸ್ತೆ ಪಕ್ಕದಲ್ಲಿ ಕೆಎ-20-ಎಂಡಿ-3249 ಕಾರನ್ನು ನ್ಯಾಯಾಲಯದ ಮುಂದೆ ಇರುವ ಆರೋಪಿ ಅತೀ ವೇಗ ಹಾಗೂ ಅಜಾಗರೂಕತೆಯಿಂದ ರಸ್ತೆಯ ತೀರ ಎಡ ಬದಿಗೆ ಚಲಾಯಿಸಿ ಕೆಎ-20-ಇಎನ್-2987 ಸ್ಕೂಟರ್ ಗೆ ಡಿಕ್ಕಿ ಪಡಿಸಿದ್ದು ಅದರ ಸವಾರ ರಸ್ತೆಗೆ ಬಿದ್ದು ತೀವರವಾಗಿ ಗಾಯಗೊಂಡಿದ್ದು, ಸ್ಥಳೀಯರಾದ ನಾವೆಲ್ಲರೂ ಅದನ್ನು ಕಂಡು ಆತನನ್ನು ಉಪಚರಿಸಿ ಆಸ್ಪತ್ರೆಗೆ ಸ್ಥಳಾಂತರಿಸಿದ್ದು ಅದೇ ದಿನ ಆತ ಬೆಳಗ್ಗೆ 10-25 ರ ಸಮಯದಲ್ಲಿ ಮೃತಪಟ್ಟ ಬಗ್ಗೆ ನನಗೆ ತಿಳಿದು ಬಂದಿರುತ್ತದೆ ಎಂದರೆ ಸರಿಯಲ್ಲ. ಸದ್ರಿ ವಾಹನಗಳು ನಿಪಿ-5 ರಿಂದ 8 ರಲ್ಲಿ ಕಂಡು ಬರುತ್ತದೆ ಎಂದರೆ ನನಗೆ ತಿಳಿದಿಲ್ಲ. ಈ ವಿಚಾರವಾಗಿ

ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**